ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ 486 ಮರುಹಂಚಿಕೆ 2014-15 ವ&ನಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:13-10-2017

## ಸುತ್ತೋಲೆ

ವಿಷಯ: ಸಂಯುಕ್ತ ಪದವಿ ಕಾಲೇಜುಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳಲ್ಲಿ ಯುಜಿಸಿ ವೇತನ ಶ್ರೇಣಿಯೊಂದಿಗೆ ಕರ್ತವ್ಯನಿರ್ವಹಿಸುತ್ತಿರುವ ಉಪನ್ಯಾಸಕರನ್ನು ಪದವಿ ಕಾಲೇಜುಗಳಿಗೆ ಮರುಹಂಚಿಕೆ ಮಾಡುವ ಬಗ್ಗೆ.

ಉಲ್ಲೇಖ: ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಉನ್ನತ ಶಿಕ್ಷಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:24.03.2011ರಂದು ನಡೆದ ಸಭೆಯ ನಡವಳಿಗಳು.

*****

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಕರ್ತವ್ಯನಿರ್ವಹಿಸುತ್ತಿದ್ದ ಸಂಯುಕ್ತ ಪದವಿ ಕಾಲೇಜುಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳಲ್ಲಿ ಯುಜಿಸಿ ವೇತನ ಶ್ರೇಣಿಯೊಂದಿಗೆ ಕರ್ತವ್ಯನಿರ್ವಹಿಸುತ್ತಿರುವ ಉಪನ್ಯಾಸಕರನ್ನು ಪದವಿ ಕಾಲೇಜುಗಳಿಗೆ ಮರುಹಂಚಿಕೆ ಮಾಡುವ ಕುರಿತು ದಿನಾಂಕ:26.10.2017ರಂದು ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಹಮ್ಮಿಕೊಳ್ಳಲಾಗಿದೆ. ಪದವಿ ಕಾಲೇಜಿಗೆ ಮರುಹಂಚಿಕೆ ಹೊಂದಲು ಅರ್ಹರಿರುವ ಬೋಧಕರು ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವುದು.

**(ಕರಡು ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)**

ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು

**ಇವರಿಗೆ**

1. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು- ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಯುಜಿಸಿ ವೇತನ ಶ್ರೇಣಿಯೊಂದಿಗೆ ಕರ್ತವ್ಯನಿರ್ವಹಿಸುತ್ತಿರುವ ಬೋಧಕರು ಮುಂದಿನ ಸ್ಥಳನಿಯುಕ್ತಿಗಾಗಿ ಈ ಇಲಾಖೆಯಲ್ಲಿ ಕೌನ್ಸಿಲಿಂಗ್‌ಗಾಗಿ ಹಾಜರಾಗಲು ಬಿಡುಗಡೆ ಗೊಳಿಸುವಂತೆ ಕೋರಿದೆ.
2. ಎಲ್ಲಾ ಪ್ರಾದೇಶಿಕ ಜಂಟಿನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಗುಲ್ಬರ್ಗಾ, ಮಂಗಳೂರು, ಮೈಸೂರು, ಶಿವಮೊಗ್ಗ, ಧಾರವಾಡ (ಎಲ್ಲಾ ಪ್ರಾದೇಶಿಕ ಜಂಟಿನಿರ್ದೇಶಕರು ಅಥವಾ ಅವರ ಪ್ರತಿನಿಧಿಗಳು ಮೇಲ್ಕಂಡ ಕೌನ್ಸಿಲಿಂಗ್ ದಿನಾಂಕದಂದು ಅಗತ್ಯ ದಾಖಲಾತಿಗಳೊಂದಿಗೆ ಹಾಜರಾಗಲು ಸೂಚಿಸಿದೆ).

**ಪ್ರತಿಗಳು**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ(ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು
2. ಮ್ಯಾನೇಜರ್/ಅಧೀಕ್ಷಕರು, ಆಯವ್ಯಯ ಮತ್ತು ಯೋಜನೆ ವಿಭಾಗ, ನೇಮಕಾತಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು-ಇಲಾಖಾ ವೆಬ್‌ಸೈಟ್ ನಲ್ಲಿ ಪ್ರಕಟಿಸುವುದು.
4. ಕಛೇರಿ ಪ್ರತಿ.

486 redply .DOC